



ಅರುಣ ಪಿ. ಭಟ್ಟ

## ವಾರಭವಿಷ್ಯ: 31.03.2022ರಿಂದ 06.04.2022ರವರೆಗೆ





ಹೊಸ ಕೆಲಸಗಳಿಗೆ ಪ್ರಯತ್ನಿಸಲು ಸೂಕ್ತ ಕಾಲ. ಉದ್ಯೋಗ ವಿಚಾರದಲ್ಲಿ ಅದ್ಭುತ ಯಶಸ್ಸಿನೊಂದಿಗೆ ವಾರದ ಆರಂಭ ಆಗುವ ಸಾಧ್ಯತೆ ಇದೆ. ಕಲೆ, ಬರವಣಿಗೆ, ವೈದ್ಯಕೀಯ, ನಿರ್ಮಾಣ, ಭದ್ರತೆ ಮತ್ತು ತಂತ್ರಜ್ಞಾನದಂಥ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಗ್ರಹಗತಿಗಳು ಅನುಕೂಲಕರವಾಗಿವೆ. ಶುಭದಿನ 6. ಗೋಪೂಜೆ ಮಾಡಿರಿ. ಉಮಾಮಹೇಶ್ವರ ಪ್ರಾರ್ಥನೆ ಮಾಡಿರಿ.

---




ಆದಾಯ ಹೆಚ್ಚಳಕ್ಕೆ ಅವಕಾಶ ಇದೆ. ವಾರದ ಆರಂಭದಲ್ಲಿ ಕುಟುಂಬದಲ್ಲಿ ಸಂತೋಷವಾಗಿ ಇರುವುದರಿಂದ ನಿಮ್ಮ ಮನಸು ಕೂಡ ಸಮಾಧಾನವಾಗಿ ಇರುತ್ತದೆ. ಹಲವು ಕ್ಷೇತ್ರದಲ್ಲಿ ನೀವು ಈ ಹಿಂದೆ ಪಟ್ಟ ಶ್ರಮಕ್ಕೆ ಈಗ ಫಲಿತಾಂಶ ದೊರೆಯುತ್ತದೆ. ನಿಮ್ಮ ಜೀವನಮಟ್ಟ ಹೆಚ್ಚುತ್ತದೆ. ಉದ್ಯೋಗ ವಿಚಾರದಲ್ಲಿ ಯಶಸ್ಸು ನಿಮ್ಮಮನೆಯ ಬಾಗಿಲು ಬಡಿಯುತ್ತದೆ. ಶುಭದಿನ 02. ಹನುಮಾನ್ ಚಾಲೀಸ್ ಪಠಿಸಿರಿ.

---




ಶುಭ ಕಾರ್ಯವನ್ನು ಆಯೋಜಿಸುವ ಸಾಧ್ಯತೆ ಇದೆ. ಈ ವಾರದ ಮೊದಲಾರ್ಧದಲ್ಲಿ ಗ್ರಹಗತಿಗಳು ನಿಮಗೆ ಅನುಕೂಲಕರವಾಗಿವೆ. ಈ ಅವಧಿಯಲ್ಲಿ ಅತಿ ಮುಖ್ಯವಾದ ಕೆಲಸಗಳನ್ನು ಮಾಡಿಕೊಂಡು ಬಿಡಿ. ಉದ್ಯೋಗ ಸ್ಥಳದಲ್ಲಿ ನಿಮ್ಮ ಗೌರವ, ವರ್ಚಸ್ಸು ಹೆಚ್ಚುವ ಸಾಧ್ಯತೆ ಇದೆ. ಸಹೋದ್ಯೋಗಿಗಳ ಜತೆಗೆ ನಿಮ್ಮ ಬಾಂಧವ್ಯ ಗಟ್ಟಿ ಆಗಲಿದೆ. ಶುಭದಿನ 04. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.

---





ಈ ವಾರ ಸಕಾರಾತ್ಮಕ ಪ್ರಭಾವ ನಿಮ್ಮ ಮೇಲೆ ಬೀರಲಿರುವ ಗ್ರಹಗತಿಗಳ ಕಾರಣಕ್ಕೆ ಸದ್ಯಕ್ಕೆ ನೀವು ಎದುರಿಸುತ್ತಿರುವ ಹಲವು ಬಿಕ್ಕಟ್ಟುಗಳು ನಿವಾರಣೆ ಆಗುತ್ತವೆ. ಕಾನೂನು ವ್ಯಾಜ್ಯಗಳು, ವಾದ–ಕುಟುಂಬದಲ್ಲಿ ಸಮತೋಲನ ಕಾಯ್ದುಕೊಳ್ಳಲು ಪ್ರಯತ್ನ ಮಾಡುತ್ತೀರಿ. ಹೂಡಿಕೆ, ಸಂಪತ್ತು ವಿಸ್ತರಣೆ ಹಾಗೂ ವಿದೇಶಿ ವ್ಯವಹಾರದಲ್ಲಿ ನಿರೀಕ್ಷಿತ ಫಲಿತಾಂಶ ದೊರೆಯಲಿದೆ. ಶುಭದಿನ 01. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.

---





ಆರೋಗ್ಯವೂ ಸೇರಿದಂತೆ ಹಲವು ಸಮಸ್ಯೆಗಳು ಬಗೆಹರಿಯಲು ಸಾಧ್ಯವಾಗುತ್ತದೆ. ಇದರಿಂದ ನಿಮ್ಮ ಸಾಮರ್ಥ್ಯ, ಉತ್ಸಾಹ ಮಾಮೂಲಿಗಿಂತ ಹೆಚ್ಚಾಗಿ ಇರುತ್ತದೆ. ಮನೆಯಲ್ಲಿ ಶುಭ ಕಾರ್ಯ ಆಯೋಜಿಸುವ ಸಾಧ್ಯತೆ ಇದೆ. ನಿಮಗೆ ವಹಿಸಿದ ಜವಾಬ್ದಾರಿಗಳನ್ನು ಸಹ ತುಂಬ ಸಲೀಸಾಗಿ ಪೂರ್ಣಗೊಳಿಸುತ್ತೀರಿ. ಗೃಹಾಲಂಕಾರ ವಸ್ತುಗಳನ್ನು ಖರೀದಿ ಮಾಡುವ ಸಾಧ್ಯತೆ ಇದೆ. ಶುಭದಿನ 01. ವಿಷ್ಣು ಸಹಸ್ರನಾಮ ಓದಿರಿ.

---




ವಾರದ ಶುರುವಿನಲ್ಲೇ ಉದ್ಯೋಗ ವಿಚಾರವಾಗಿ ಪ್ರಯಾಣ ಮಾಡಬೇಕಾಗಿ ಬರಬಹುದು. ವರ್ಗಾವಣೆಯ ಸಾಧ್ಯತೆ ಇದೆ. ವ್ಯಾಪಾರ–ವ್ಯವಹಾರ ವಿಸ್ತರಣೆಗೆ ಆಲೋಚನೆ ಮಾಡುತ್ತೀರಿ. ಆದರೆ ಅದರ ಸಲುವಾಗಿಯೂ ಪ್ರಯಾಣ ಮಾಡುವ ಅಗತ್ಯ ಕಂಡುಬರುತ್ತದೆ. ಹಣಕಾಸು ಹೂಡಿಕೆಗೆ ಸಂಬಂಧಿಸಿದಂತೆ ನಿಮಗೆ ಅನುಕೂಲ ಆಗಲಿದೆ. ಶುಭದಿನ 06. ನವದುರ್ಗಾ ಆರಾಧನೆ ಮಾಡಿರಿ.

---





ಈ ವಾರ ಹಲವು ಕ್ಷೇತ್ರದಲ್ಲಿ ಸಕಾರಾತ್ಮಕವಾದ ಫಲಿತಾಂಶ ಪಡೆಯಲು ಸೂಕ್ತವಾಗಿದೆ. ರಚನಾತ್ಮಕ ಕಲೆ, ಸಾಹಿತ್ಯ, ಶಿಕ್ಷಣ, ಉಪನ್ಯಾಸ, ಸಂಶೋಧನೆ, ತಂತ್ರಜ್ಞಾನ ಕ್ಷೇತ್ರದಲ್ಲಿ ಆಸಕ್ತಿ ಇದ್ದರೆ ದೊಡ್ಡ ಮಟ್ಟದಲ್ಲಿ ಅದೃಷ್ಟ ನಿಮ್ಮ ಪಾಲಿಗೆ ಹುಡುಕಿಕೊಂಡು ಬರಲಿದೆ. ಇನ್ನು ಮ್ಯಾನೇಜ್‌ಮೆಂಟ್, ವಾಣಿಜ್ಯ, ಸ್ಪರ್ಧಾತ್ಮಕ ಕ್ಷೇತ್ರದಲ್ಲೂ ಯಶಸ್ಸು ದೊರೆಯಲಿದೆ. ಶುಭದಿನ 01. ಆದಿತ್ಯ ಹೃದಯ ಪಠಿಸಿರಿ.

---





ವಾರದ ಮೊದಲ ಭಾಗದಲ್ಲಿ ಅತಿ ಮುಖ್ಯವಾದ ಕೆಲಸ ಮುಗಿಸಿಕೊಳ್ಳಿ. ಉದ್ಯೋಗಸ್ಥರಿರಲಿ ಅಥವಾ ವ್ಯಾಪಾರಿಗಳು ಉದ್ಯಮಿಗಳಿರಲಿ ಗುಣಮಟ್ಟದ ನಿರ್ಧಾರ ಹಾಗೂ ಆಲೋಚನೆಗಳಿಂದ ಮೆಚ್ಚುಗೆಗೆ ಪಾತ್ರರಾಗುತ್ತೀರಿ. ನಿಮ್ಮ ಸಾಮರ್ಥ್ಯ ಕಂಡು ಇತರರು ಬೆರಗಾಗುತ್ತಾರೆ. ಬಹುಮಾನ ಅಥವಾ ಸಾರ್ವಜನಿಕ ಮನ್ನಣೆ ದೊರೆಯುವ ಅವಕಾಶಗಳು ನಿಚ್ಚಳವಾಗಿವೆ. ಶುಭದಿನ 02. ಲಕ್ಷ್ಮೀ ನರಸಿಂಹ ಸ್ತೋತ್ರ ಪಠಿಸಿರಿ.

---





ಗ್ರಹಗತಿಗಳು ನಿಮ್ಮ ಕಡೆಗೆ ಶುಭ ದೃಷ್ಟಿ ಬೀರುತ್ತಿವೆ. ಬಾಕಿ ಇರುವ ನಿಮ್ಮ ಕೆಲಸಗಳಿಗೆ ಈ ವಾರ ಪರಿಹಾರ ಸಿಗಲಿದೆ. ವೈಯಕ್ತಿಕ ಸಂಗತಿಗಳಲ್ಲಿ ನಿಮ್ಮ ಪಾಲಿಗೆ ಯಶಸ್ಸು ದೊರೆಯಲಿದೆ. ತುಂಬ ಮುಖ್ಯವಾದ ಚರ್ಚೆ ಕೂಡ ನಡೆಸುವ ಸಾಧ್ಯತೆ ಇದೆ. ಈ ಅವಧಿಯಲ್ಲಿ ಹೆಚ್ಚು ಸಮಾಧಾನ ಹಾಗೂ ಸಂತೋಷದಿಂದ ಕಾಣಿಸಿಕೊಳ್ಳುತ್ತೀರಿ. ಶುಭದಿನ 06. ಸುಬ್ರಹ್ಮಣ್ಯ ಸ್ವಾಮಿಗೆ ಕ್ಷೀರಾಭಿಷೇಕ ಮಾಡಿರಿ.

---




ವಿದೇಶ ಪ್ರಯಾಣ ಮಾಡುವ ಸಾಧ್ಯತೆ ಇದೆ. ವಿದೇಶ ವ್ಯವಹಾರ ಹಾಗೂ ಕಾನೂನು– ಕಟ್ಟಳೆ ವ್ಯವಹಾರಗಳು ಈ ಅವಧಿಯಲ್ಲಿ ನಿಮಗೆ ಅನುಕೂಲಕರವಾಗಿ ಇವೆ. ದೂರದ ಪ್ರದೇಶಗಳಲ್ಲಿ ವ್ಯಾಪಾರ ವ್ಯವಹಾರ ವಿಸ್ತರಣೆ ಮಾಡಬೇಕು ಅಂದುಕೊಳ್ಳುತ್ತಿರುವವರಿಗೆ ಹಲವು ಅವಕಾಶಗಳು ದೊರೆಯಲಿವೆ. ಆರೋಗ್ಯದಲ್ಲಿ ಕೆಲ ಸಮಸ್ಯೆಗಳು ಕಾಣಿಸಿಕೊಳ್ಳುವ ಸಾಧ್ಯತೆಗಳಿವೆ. ಶುಭದಿನ 02. ಕಾಲಭೈರವನ ಸೇವೆ ಮಾಡಿರಿ.

---




ವಾರದ ಶುರುವಿನಿಂದಲೇ ನಿಮ್ಮ ಆರೋಗ್ಯ ಉತ್ತಮವಾಗಿರುತ್ತದೆ. ಆ ಕಾರಣಕ್ಕೆ ನೀವೂ ಸಂತೋಷವಾಗಿರುತ್ತೀರಿ. ಸದ್ಯಕ್ಕೆ ನೀವು ಎದುರಿಸುತ್ತಿರುವ ಬಿಕ್ಕಟ್ಟುಗಳು ನಿವಾರಣೆ ಆಗುತ್ತವೆ. ಆಲೋಚನೆಯಲ್ಲಿ ಸಕಾರಾತ್ಮಕವಾದ ಪ್ರಗತಿ ಕಾಣಿಸಿಕೊಳ್ಳುತ್ತದೆ. ಹೊಸದಾಗಿ ಕೆಲಸಕ್ಕಾಗಿ ಪ್ರಯತ್ನ ಮಾಡುತ್ತಿರುವವರು ಶ್ರಮವನ್ನು ಮುಂದುವರಿಸಬೇಕು. ಶುಭದಿನ 04. ಶನಿಸ್ತೋತ್ರ ಪಠಿಸಿರಿ.

---




ಕುಟುಂಬದವರಿಂದ ಹಾಗೂ ಸಂಬಂಧಿಕರಿಂದ ಶುಭ ಸುದ್ದಿಯನ್ನು ಕೇಳುತ್ತೀರಿ. ಈವರೆಗಿನ ಬಿಕ್ಕಟ್ಟು– ಸಮಸ್ಯೆಗಳು ಶಮನವಾಗುತ್ತವೆ. ನಿಮ್ಮ ಸಾಮರ್ಥ್ಯ, ಚೈತನ್ಯ ವೃದ್ಧಿಯಾಗುತ್ತದೆ. ಇದರ ಜತೆಗೆ ಧೈರ್ಯ, ಮಾನಸಿಕ ದೃಢತೆ ಹೆಚ್ಚಲಿದೆ. ನಿಮ್ಮ ವಿರೋಧಿಗಳನ್ನು ಈ ಅವಧಿಯಲ್ಲಿ ಮಣಿಸುತ್ತೀರಿ. ಹಣಕಾಸು ಹೂಡಿಕೆ ಲಾಭದಾಯಕವಾಗಿ ಇರುತ್ತದೆ. ಶುಭದಿನ 05. ಗಣಪತಿಗೆ ದೂರ್ವಾರ್ಚನೆ ಮಾಡಿರಿ.